ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

BRC /CRC ಸೇವೆಯನ್ನು ಮುಂದುವರೆಸುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) -

74 (812) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2011-12ನೇ ಸಾಲಿನಲ್ಲಿ NRDWP ಕೇಂದ್ರ ಪುರಸ್ಕೃತ ಯೋಜನೆಯ Support Activity ಘಟಕದಡಿ ನೇಮಕಗೊಂಡು ಕಾರ್ಯ ನಿರ್ವಹಿಸಿದ BRC/CRC ಸೇವೆಯನ್ನು ಮುಂದುವರಿಸುವ ಕುರಿತು ಕಳೆದ ಅಧಿವೇಶನದಲ್ಲಿ ಸರ್ಕಾರ ಭರವಸೆ ನೀಡಿರುವುದು ನಿಜವೇ; ಭರವಸೆ ಈಡೇರಿದೆಯೇ;

(ಆ) ಸರ್ಕಾರದ ಭರವಸೆಯಂತೆ ಯಾವ ಯಾವ ಜಿಲ್ಲೆಗಳಲ್ಲಿ BRC/CRC ಸೇವೆಯನ್ನು ಮುಂದುವರೆಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು WP 5628/2020 ಹಾಗೂ ಇತರೆ ನ್ಯಾಯಾಲಯಗಳಲ್ಲಿ BRC/CRC ಸಂಯೋಜಕರುಗಳು ತಮ್ಮ ಸೇವೆಯನ್ನು ಜಲ್ ಜೀವನ್ ಮಿಷನ್ ಯೋಜನೆಯಲ್ಲೂ ಮುಂದುವರಿಸಲು ಧಾವೆ ಹೂಡಿರುವುದು ನಿಜವೇ; ಹಾಗಾದಲ್ಲಿ ಸರ್ಕಾರ ಈ ಸಂಬಂಧ ಯಾವ ಕ್ರಮ ಕೈಗೊಂಡಿದೆ;

(ಈ) RBC/CRC ಸಂಯೋಜಕರುಗಳ ಮನವಿಯ ಮೇರೆಗೆ ಕೇಂದ್ರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ರಾಜ್ಯ ಸರ್ಕಾರಗಳಿಗೆ ಆರ್ಥಿಕ ಮತ್ತು ತಾಂತ್ರಿಕ ನೆರವನ್ನು ಮಾತ್ರ ನೀಡುತ್ತಿರುವುದಾಗಿ ಸೂಚಿಸಿದ್ದು, ಸಿಬ್ಬಂದಿ ನೇಮಕ ವಿಚಾರ ರಾಜ್ಯ ಸರ್ಕಾರದ ವಿವೇಚನೆಗೆ ಬಿಟ್ಟಿರುವುದಾಗಿ ತಿಳಿಸಿರುವುದು ನಿಜವೇ; (ವಿವರವಾದ ಮಾಹಿತಿ ನೀಡುವುದು)

(ಉ) ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ 7610CH ರಂತೆ ಸರ್ಕಾರವು Policy Dicision ಮಾಡಬೇಕಾಗಿರುವುದು ನಿಜವೇ;

(ಊ) ಯಾವ ಕಾಲಮಿತಿಯಲ್ಲಿ ಸರ್ಕಾರವು Policy Dicision ಗಳ ಸೇವೆಯನ್ನು ಯಥಾವತ್ತಾಗಿ ಮುಂದುವರೆಸುವುದು?